ವಿಜಯವಾಣಿ
VIJAYAVANI » MANGALURU
ಶುಕ್ರವಾರ 30 ಸೆಪ್ಟೆಂಬರ್ 2022
30 SEPTEMBER 2022

ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣಗೊಳಿಸಿ ಅಬ್ದುಲ್ ಅಹದ್ ಹೇಳಿಕೆ

# ಆರೋಗ್ಯಕ್ಕಾಗಿ ಹೃದಯ ತಪಾಸಣೆ

■ ವಿಜಯವಾಣಿ ಸುದ್ದಿಜಾಲ ಉಡುಪಿ

ಕುಟುಂಬದಲ್ಲಿ ಅಕಾಲಿಕ ಮರಣ ಸಾಕಷ್ಟು ತೊಂದರೆ ಉಂಟು ಮಾಡುತ್ತದೆ. ಆದ್ದರಿಂದ ಕಾಲ ಕಾಲಕ್ಕೆ ಹೃದಯ ತಪಾಸಣೆ ಮಾಡುವುದರ ಮೂಲಕ ಹೃದಯದ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಕರಾವಳಿ ಭದ್ರತಾ ಪಡೆ ಪೊಲೀಸ್ ಅಧೀಕ್ಷಕ ಅಬ್ದುಲ್ ಅಹದ್ ತಿಳಿಸಿದರು.

ಗುರುವಾರ ವಿಶ್ವ ಹೃದಯ ದಿನ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ, ಹೃದಯ ರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಮುದಾಯ ವೈದ್ಯಕೀಯ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣಗೊಳಿಸಿ ಅವರು ಮಾತನಾಡಿದರು.

ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್ ಮಾತನಾಡಿ, ಹೃದಯವು ವ್ಯಕ್ತಿ ಜೀವಂತವಾಗಿರಲು ಒಂದು ಯಂತ್ರದ ತರಹ ಕೆಲಸ ಮಾಡುತ್ತದೆ. ದೇಹದ ಎಲ್ಲ ಜೀವಕೋಶಗಳಿಗೆ ರಕ್ತ, ಆಮ್ಲಜನಕ ಮತ್ತು ಪೌಷ್ಟಿಕಾಂಶಗಳನ್ನು ಪೂರೈಕೆ ಮಾಡುವುದರೊಂದಿಗೆ ರಕ್ತವನ್ನು ಶುದ್ಧೀಕರಿಸುವ ಕಾರ್ಯ ಮಾಡುತ್ತದೆ. ಇಂತಹ ಅಮೂಲ್ಯ ಅಂಗವನ್ನು ಆರೋಗ್ಯವಾಗಿಟ್ಟುಕೊಳ್ಳಬೇಕು ಎಂದರು. ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿದರು.



ವಿಶ್ವ ಹೃದಯ ದಿನ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಆವರಣದಲ್ಲಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣಗೊಳಿಸಲಾಯಿತು. ಕರಾವಳಿ ಭದ್ರತಾ ಪಡೆ ಪೊಲೀಸ್ ಅಧೀಕ್ಷಕ ಅಬ್ದುಲ್ ಅಹದ್, ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮತ್ತಿತರರಿದ್ದರು.

ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್, ಮಲ್ಪೆ ಕರಾವಳಿ ಭದ್ರತಾ ಪೊಲೀಸ್ ನಿರೀಕ್ಷಕ ಡಾ.ಶಂಕರ್ ಎಸ್.ಕೆ. ಉಪಸ್ಥಿತರಿದ್ದರು. ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ.ಅಶ್ವಿನಿ ಕುಮಾರ್ ಅವಲೋಕನ ನೀಡಿದರು. ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ. ಪದ್ಮಕುಮಾರ್ ಸ್ವಾಗತಿಸಿದರು. ಹೃದಯನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಗಣೇಶ್ ಕಾಮತ್ ವಂದಿಸಿದರು. ಶ್ರೀನಾಥ್ ಮಣಿಪಾಲ ಮತ್ತು ರವಿ ಹಿರೇಬೆಟ್ಟು ಪರಿಸರ ಸ್ನೇಹಿ ವಸ್ತುಗಳಿಂದ ಶಿಲ್ಪ ತಯಾರಿಸಿದ್ದರು. ಡಾ.ಈಶ್ವರಿ ಆಚಾರ್ ಕಾರ್ಯಕ್ರಮ ನಿರ್ವಹಿಸಿದರು.

ಕಾರ್ಯಕ್ರಮದ ಅಂಗವಾಗಿ ಉಚಿತವಾಗಿ, ಮಧುಮೇಹ, ರಕ್ತದ ಒತ್ತಡ, ಇಸಿಜಿ ಮತ್ತು ವೈದ್ಯರೊಂದಿಗೆ ಸಮಾಲೋಚನೆ ನಡೆಸಲಾಯಿತು.

ವಿಜಯ ಕರ್ನಾಟಕ
ಶುಕ್ರವಾರ,30 ಸೆಪ್ಟೆಂಬರ್ 2022,
ಮಂಗಳೂರು

# ವಿಶ್ವ ಹೃದಯ ದಿನಾಚರಣೆ: ಕಲಾಕೃತಿ ಅನಾವರಣ

■ ವಿಕ ಸುದ್ದಿಲೋಕ ಉಡುಪಿ

ವಿಶ್ವ ಹೃದಯ ದಿನದ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ, ಹೃದಯ ರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ ಹಾಗೂ ಸಮುದಾಯ ವೈದ್ಯಕೀಯ ವಿಭಾಗಗಳ ಆಶ್ರಯದಲ್ಲಿ ಹೃದಯದ ಆರೋಗ್ಯದ ಬಗ್ಗೆ ಅರಿವು ಮೂಡಿಸಲು 'ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ'ದ ಅನಾವರಣ ಮತ್ತು ಸಾರ್ವಜನಿಕರಿಗೆ ಉಚಿತ ಹೃದಯ ತಪಾಸಣಾ ಶಿಬಿರ ಗುರುವಾರ ನಡೆಯಿತು.

ಕರಾವಳಿ ಭದ್ರತಾ ಪೊಲೀಸ್‌ನ ಅಧೀಕ್ಷಕ ಅಬ್ದುಲ್ ಅಹದ್ ಈ ಜಾಗೃತಿ ಶಿಲ್ಪವನ್ನು ಅನಾವರಣಗೊಳಿಸಿ ಮಾತನಾಡಿ, ಅಕಾಲಿಕ ಮರಣ ಸಾಕಷ್ಟು ತೊಂದರೆಯನ್ನುಂಟು ಮಾಡುತ್ತದೆ. ಆದ್ದರಿಂದ ಕಾಲಕಾಲಕ್ಕೆ ತಕ್ಕಂತೆ ನಮ್ಮ ಹೃದಯ ತಪಾಸಣೆ ಮಾಡುವುದರ ಮೂಲಕ ಹೃದಯ ಮತ್ತು ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್ ಹೃದಯ ಆರೋಗ್ಯ ತಪಾಸಣಾ ಪ್ಯಾಕೇಜುಗಳನ್ನು ಬಿಡುಗಡೆ ಮಾಡಿದರು. ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ಮುಖ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್, ಮಲ್ಪೆ ಭದ್ರತಾ ಪೊಲೀಸ್ ನಿರೀಕ್ಷಕ ಡಾ. ಶಂಕರ್ ಎಸ್.ಕೆ. ಉಪಸ್ಥಿತರಿದ್ದರು.



ವಿಶ್ವ ಹೃದಯ ದಿನದ ಕುರಿತು ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ.ಅಶ್ವಿನಿ ಕುಮಾರ್ ಮಾತನಾಡಿದರು. ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ. ಪದ್ಮಕುಮಾರ್ ಸ್ವಾಗತಿಸಿದರು. ಹೃದಯನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಗಣೇಶ್ ಕಾಮತ್ ವಂದಿಸಿದರು. ಈ ಜಾಗೃತಿ ಕಲಾಕೃತಿಯನ್ನು ಕಲಾವಿದರಾದ ಶ್ರೀನಾಥ್ ಮಣಿಪಾಲ ಮತ್ತು ರವಿ ಹಿರೇಬೆಟ್ಟು ತಯಾರಿಸಿದ್ದರು. ಡಾ ಈಶ್ವರಿ ಆಚಾರ್ ಕಾರ್ಯಕ್ರಮ ನಿರೂಪಿಸಿದರು.

ಉದಯವಾಣಿ
ಸುದಿನ

ಮಣಿಪಾಲ
2022
ಸೆಪ್ಟಂಬರ್ 30 | ಶುಕ್ರವಾರ

▶ ವಿಶ್ವ ಹೃದಯ ದಿನ

# ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ



**ಮಣಿಪಾಲ, ಸೆ.29:** ವಿಶ್ವ ಹೃದಯ ದಿನದ ಅಂಗವಾಗಿ ಕೆಎಂಸಿ ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ, ಹೃದಯರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಮುದಾಯ ವೈದ್ಯಕೀಯ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಗುರುವಾರ ಹೃದಯದ ಆರೋಗ್ಯದ ಅರಿವು ಮೂಡಿಸಲು ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ ಮತ್ತು ಸಾರ್ವಜನಿಕರಿಗೆ ಉಚಿತ ಹೃದಯ ತಪಾಸಣೆ ಶಿಬಿರ ಆಯೋಜಿಸಲಾಯಿತು.

ಕರಾವಳಿ ಕಾವಲು ಪಡೆಯ ಪೊಲೀಸ್ ಅಧೀಕ್ಷಕ ಅಬ್ದುಲ್ ಅಹದ್ ಅವರು ಹೃದಯ ಆರೋಗ್ಯ ಜಾಗೃತಿ ಶಿಲ್ಪವನ್ನು ಅನಾವರಣಗೊಳಿಸಿ, ನಿಯಮಿತವಾಗಿ ಹೃದಯ ತಪಾಸಣೆ ಮಾಡುವುದರ ಮೂಲಕನಮ್ಮಹೃದಯಮತ್ತುಆರೋಗ್ಯ ವನ್ನು ಕಾಪಾಡಿಕೊಳ್ಳಬೇಕು ಎಂದರು.

ಕೆಎಂಸಿ ಡೀನ್ ಡಾ| ಶರತ್ ಕುಮಾರ್ ರಾವ್, ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ಮುಖ್ಯ ನಿರ್ವಹಣಾಧಿಕಾರಿ ಡಾ| ಆನಂದ್ ವೇಣುಗೋಪಾಲ್, ಮಲ್ಪೆ ಭದ್ರತಾ ಪೊಲೀಸ್ ನಿರೀಕ್ಷಕ ಡಾ| ಶಂಕರ್ ಎಸ್. ಕೆ. ಉಪಸ್ಥಿತರಿದ್ದರು.

ವಿಶ್ವ ಹೃದಯ ದಿನದ ಕುರಿತು ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ| ಅಶ್ವಿನಿ ಕುಮಾರ್ ಅವಲೋಕನ ನೀಡಿದರು. ಶಿಲ್ಪವನ್ನು ಶ್ರೀನಾಥ್ ಮಣಿಪಾಲ ಮತ್ತು ರವಿ ಹಿರೇಬೆಟ್ಟು ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಉಚಿತ ಮಧುಮೇಹ, ರಕ್ತದ ಒತ್ತಡ, ಇಸಿಜಿ ಮತ್ತು ವೈದ್ಯರೊಂದಿಗೆ ಸಮಾಲೋಚನೆ ನಡೆಸಲಾಯಿತು. ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ| ಪದ್ಮಕುಮಾರ್ ಸ್ವಾಗತಿಸಿದರು. ಹೃದಯನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ| ಗಣೇಶ್ ಕಾಮತ್ ವಂದಿಸಿದರು. ಡಾ| ಈಶ್ವರಿ ಆಚಾರ್ ನಿರ್ವಹಿಸಿದರು.

ಪ್ರಜಾವಾಣಿ

ಶುಕ್ರವಾರ • ಸೆಪ್ಟೆಂಬರ್ 30, 2022

# ಹೃದ್ರೋಗ: ಅಕಾಲಿಕ ಮರಣ ಪ್ರಮಾಣ ಹೆಚ್ಚು

## ಮಣಿಪಾಲ: ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ, ತಪಾಸಣೆ

ಪ್ರಜಾವಾಣಿ ವಾರ್ತೆ



ಮಣಿಪಾಲದ ಕಸ್ತೂರ ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಗುರುವಾರ ವಿಶ್ವ ಹೃದಯ ದಿನ ಆಚರಿಸಲಾಯಿತು.

ಉಡುಪಿ: ಮಣಿಪಾಲದ ಕಸ್ತೂರ ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ, ಹೃದಯ ರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ, ಸಮುದಾಯ ವೈದ್ಯಕೀಯ ವಿಭಾಗಗಳ ಆಶ್ರಯದಲ್ಲಿ ಗುರುವಾರ ವಿಶ್ವ ಹೃದಯ ದಿನ ಆಚರಿಸಲಾಯಿತು.

ಹೃದಯದ ಆರೋಗ್ಯದ ಬಗ್ಗೆ ಕಾಳಜಿ ಮೂಡಿಸಲು ಆಸ್ಪತ್ರೆಯಲ್ಲಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ ಮಾಡಲಾಯಿತು. ಇದೇ ವೇಳೆ ಸಾರ್ವಜನಿಕರಿಗೆ ಉಚಿತವಾಗಿ ಹೃದಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

ಪ್ರತಿವರ್ಷ ಸೆ.29ರಂದು ವಿಶ್ವ ಹೃದಯ ದಿನವನ್ನಾಗಿ ಆಚರಿಸಲಾಗುತ್ತದೆ. ಹೃದಯ ರಕ್ತನಾಳದ ಕಾಯಿಲೆಯ ಬಗ್ಗೆ ಜಾಗೃತಿ ಮೂಡಿಸಲಾಗುತ್ತದೆ ಎಂದು ವೈದ್ಯರು ತಿಳಿಸಿದರು.

ಕರಾವಳಿ ಭದ್ರತಾ ಪಡೆಯ ಎಸ್‌ಪಿ ಅಬ್ದುಲ್ ಅಹ್ಮದ್ ಹೃದಯ ಆರೋಗ್ಯ ಜಾಗೃತಿ ಶಿಲ್ಪ ಅನಾವರಣಗೊಳಿಸಿ ಮಾತನಾಡಿ, ಕುಟುಂಬದ ಮುಖ್ಯಸ್ಥ ಅಥವಾ ಮುಖ್ಯಸ್ಥೆಯ ಅಕಾಲಿಕ ಮರಣ ಕುಟುಂಬವನ್ನು ದೊಡ್ಡ ತೊಂದರೆಗೆ ಸಿಲುಕಿಸುತ್ತದೆ. ಅವಲಂಬಿತರ ಬಗ್ಗೆ ಒಮ್ಮೆ ಯೋಚಿಸಿ ಹೃದಯವನ್ನು ಆರೋಗ್ಯವಾಗಿಟ್ಟುಕೊಳ್ಳಬೇಕು' ಎಂದು ಸಲಹೆ ನೀಡಿದರು.

### ಮುಖ್ಯಾಂಶಗಳು

- ಪ್ರಪಂಚದಲ್ಲಿ ಸಾಂಕ್ರಾಮಿಕ ವಲ್ಲದ ರೋಗಗಳ ಅರ್ಧದಷ್ಟಿದೆ ಹೃದ್ರೋಗ
- ಉತ್ತಮ ಜೀವನ ಶೈಲಿ, ಆಹಾರ ಹೃದಯದ ಆರೋಗ್ಯದ ಗುಟ್ಟು
- ರಕ್ತ ಶುದ್ಧೀಕರಿಸುವ, ಆಮ್ಲಜನಕ ಪೂರೈಸುವ ಹೃದಯ

ಕೆಎಂಸಿ ಡೀನ್ ಡಾ.ಶರತ್ ಕುಮಾರ್ ರಾವ್ ಹೃದಯ ಆರೋಗ್ಯ ತಪಾಸಣಾ ಪ್ಯಾಕೇಜ್ ಬಿಡುಗಡೆ ಮಾಡಿ ಮಾತನಾಡಿ, ಹೃದಯ ವ್ಯಕ್ತಿ ಜೀವಂತವಾಗಿರಲು ಯಂತ್ರದಂತೆ ಕೆಲಸ ಮಾಡುತ್ತದೆ. ದೇಹದ ಎಲ್ಲ ಜೀವಕೋಶಗಳಿಗೆ ರಕ್ತ, ಆಮ್ಲಜನಕ ಮತ್ತು ಪೌಷ್ಟಿಕಾಂಶಗಳನ್ನು ಪೂರೈಸುವ ಹೃದಯ ರಕ್ತವನ್ನು ಶುದ್ಧೀಕರಿಸುವ




ಕಾರ್ಯವನ್ನೂ ಮಾಡುತ್ತದೆ. ಇಂತಹ ಬಹುಮೂಲ್ಯ ಅಂಗವನ್ನು ಆರೋಗ್ಯವಾಗಿಟ್ಟುಕೊಳ್ಳಬೇಕು ಎಂದು ಸಲಹೆ ನೀಡಿದರು.

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, 'ಸಾರ್ವಜನಿಕರ ಬೇಡಿಕೆ ಮೇರೆಗೆ ಆಸ್ಪತ್ರೆಯಲ್ಲಿ ವಿಶೇಷ ಹೃದಯ ತಪಾಸಣಾ ಪ್ಯಾಕೇಜ್ (₹3000), ಸುಧಾರಿತ ಹೃದಯ ತಪಾಸಣಾ ಪ್ಯಾಕೇಜ್ (₹4000) ಪರಿಚಯಿಸಲಾಗಿದೆ. ಜನರು ಪ್ರಯೋಜನ ಪಡೆದುಕೊಳ್ಳಬೇಕು' ಎಂದರು.

ಆಸ್ಪತ್ರೆಯ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್, ಮಲ್ಪೆ ಭದ್ರತಾ ಪೊಲೀಸ್ ಇನ್‌ಸ್ಪೆಕ್ಟರ್ ಡಾ.ಎಸ್.ಕೆ.ಶಂಕರ್ ಉಪಸ್ಥಿತರಿದ್ದರು. ವಿಶ್ವ ಹೃದಯ ದಿನದ ಕುರಿತು ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ.ಅಶ್ವಿನಿ ಕುಮಾರ್ ಅವಲೋಕನ ನೀಡಿದರು. ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ.ಪದ್ಮಕುಮಾರ್ ಸ್ವಾಗತಿಸಿದರು. ಹೃದ್ರೋಗ ತಪಾಸಣೆ ಪ್ಯಾಕೇಜ್‌ಗಳ ಕುರಿತು ಮಾಹಿತಿ ನೀಡಿದರು.

ಹೃದಯನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಗಣೇಶ್ ಕಾಮತ್ ವಂದಿಸಿದರು. ಶ್ರೀನಾಥ್ ಮಣಿಪಾಲ ಮತ್ತು ರವಿ ಹಿರೇಬೆಟ್ಟು ಪರಿಸರ ಸ್ನೇಹಿ ವಸ್ತುಗಳಿಂದ ಶಿಲ್ಪ ತಯಾರಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಉಚಿತವಾಗಿ ಮಧುಮೇಹ, ರಕ್ತದ ಒತ್ತಡ, ಇಸಿಜಿ ಮತ್ತು ವೈದ್ಯರೊಂದಿಗೆ ಸಮಾಲೋಚನೆ ಸೇವೆಗಳನ್ನು ಒದಗಿಸಲಾಯಿತು. ಡಾ.ಈಶ್ವರಿ ಆಚಾರ್ ಕಾರ್ಯಕ್ರಮ ನಿರ್ವಹಿಸಿದರು.

THE CANARA POST

# World Heart day 2022: Free heart screening camp held at Kasturba Hospital



**Manipal, Sept 29, 2022:** Department of Cardiology, Cardio Vascular and Thoracic Surgery and Community Medicine of *Kasturba Medical College and Hospital*, Manipal observed World Heart Day in a unique way through art sculpture and a free heart screening camp for the general public.

Abdul Ahad, Superintendent of Police, Coastal Security Police, Karnataka unveiled the Heart Health awareness sculpture.

***Also read:*** ***Paediatric Bone Marrow Transplantation at Kasturba Hospital- A rewarding journey***

"Many people are dependent on us in our family, untimely death causes a lot of trouble. Therefore we should maintain our heart and health by getting our heart checked from time to time," he said.

Dr. Sharath Kumar Rao, Dean- KMC launched the Hearth Health Check Packages and stressed the importance of a healthy heart.



"On public request, we are introducing Special Cardiac Health Check Package at Rs 3000 and Advanced Cardiac Health Check Package at Rs 4000. People should make use of this," Dr. Avinash Shetty, Medical Superintendent said.

Dr. Anand Venugopal, Chief Operating Officer, and Dr. Shankar S K Police Inspector, CSP Malpe were present.

***Also read:* *Advanced Immunoanalyzer inaugurated at Kasturba Hospital***

Dr. Ashwini Kumar, Head, Department of Community Medicine gave an overview on World Heart Day. Dr. Padmakumar Head, Department of Cardiology welcomed the gathering and gave an overview of Cardiac Health Check Packages. Dr. Ganesh Kamath, Head – Department of Cardio Vascular and Thoracic Surgery delivered the vote of thanks. Srinath Manipal and Ravi Hirebettu prepared the sculpture using eco-friendly used materials.
As part of the program free diabetes, blood pressure, ECG, and consultation was held. Dr. Eshwari Achar compered the program.

Every year 29th September is observed as World Heart Day. The day is celebrated to spread awareness about cardiovascular disease which causes nearly half of all the non-communicable diseases in the world. The theme of World Heart Day 2022 is "Use Heart for Every Heart".

ಉಡುಪಿ xpress

# ಕೆ.ಎಂ.ಸಿ ಆಸ್ಪತ್ರೆ: ವಿಶ್ವ ಹೃದಯ ದಿನದ ಅಂಗವಾಗಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ

September 29, 2022



ಮಣಿಪಾಲ: ಪ್ರತಿ ವರ್ಷ ಸೆಪ್ಟೆಂಬರ್ 29 ಅನ್ನು ವಿಶ್ವ ಹೃದಯ ದಿನವನ್ನಾಗಿ ಆಚರಿಸಲಾಗುತ್ತದೆ. ಹೃದಯ ರಕ್ತನಾಳದ ಕಾಯಿಲೆಯ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ, ಇದು ಪ್ರಪಂಚದ ಎಲ್ಲಾ ಸಾಂಕ್ರಾಮಿಕವಲ್ಲದ ರೋಗಗಳ ಪಾಲಿನ ಅರ್ಧದಷ್ಟಿದೆ. ವಿಶ್ವ ಹೃದಯ ದಿನದ 2022 ರ ಘೋಷ ವಾಕ್ಯ"ಪ್ರತಿ ಹೃದಯಕ್ಕಾಗಿ ಹೃದಯವನ್ನು ಬಳಸಿ" ಎನ್ನುವುದಾಗಿದೆ.

ವಿಶ್ವ ಹೃದಯ ದಿನದ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ, ಹೃದಯ ರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಮುದಾಯ ವೈದ್ಯಕೀಯ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಹೃದಯದ ಆರೋಗ್ಯದ ಅರಿವು ಮೂಡಿಸಲು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲದಲ್ಲಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ ಮತ್ತು ಸಾರ್ವಜನಿಕರಿಗೆ ಉಚಿತ ಹೃದಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.

ಕರಾವಳಿ ಭದ್ರತಾ ಪೊಲೀಸ್ ಅಧೀಕ್ಷಕ ಅಬ್ದುಲ್ ಅಹದ್, ಹೃದಯ ಆರೋಗ್ಯ ಜಾಗೃತಿ ಶಿಲ್ಪವನ್ನು ಅನಾವರಣಗೊಳಿಸಿ ಮಾತನಾಡಿ, ನಮ್ಮ ಕುಟುಂಬದಲ್ಲಿ ನಮ್ಮನ್ನು ಅವಲಂಬಿತರಾಗಿ ಬಹಳಷ್ಟು ಜನರಿರುತ್ತಾರೆ. ವ್ಯಕ್ತಿಯ ಅಕಾಲಿಕ ಮರಣ ಸಾಕಷ್ಟು ತೊಂದರೆಯನ್ನು ಉಂಟು ಮಾಡುತ್ತದೆ. ಆದ್ದರಿಂದ ಕಾಲ ಕಾಲಕ್ಕೆ ನಮ್ಮ ಹೃದಯ ತಪಾಸಣೆ ಮಾಡುವುದರ ಮೂಲಕ ಹೃದಯ ಮತ್ತು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು.

ಕೆಎಂಸಿ ಆಸ್ಪತ್ರೆಯ ಡೀನ್ ಡಾ ಶರತ್ ಕುಮಾರ್ ರಾವ್ ಹೃದಯ ಆರೋಗ್ಯ ತಪಾಸಣಾ ಪ್ಯಾಕೇಜುಗಳನ್ನು ಬಿಡುಗಡೆ ಮಾಡಿ ಮಾತನಾಡಿ, ವ್ಯಕ್ತಿ ಜೀವಂತವಾಗಿರಲು ಹೃದಯವು ಒಂದು ಯಂತ್ರದ ತರಹ ಕೆಲಸ ಮಾಡುತ್ತದೆ ಮತ್ತು ಇದು ದೇಹದ ಎಲ್ಲ ಜೀವಕೋಶಗಳಿಗೆ ರಕ್ತ, ಆಮ್ಲಜನಕ ಮತ್ತು ಪೌಷ್ಟಿಕಾಂಶಗಳನ್ನು ಪೂರೈಕೆ ಮಾಡುವುದರೊಂದಿಗೆ ರಕ್ತವನ್ನು ಶುದ್ಧೀಕರಿಸುವ ಕಾರ್ಯವನ್ನು ಮಾಡುತ್ತದೆ. ಇಂತಹ ಬಹುಮೂಲ್ಯ ಅಂಗವನ್ನು ಆರೋಗ್ಯವಾಗಿಟ್ಟುಕೊಳ್ಳಬೇಕು ಎಂದರು.



ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, ಸಾರ್ವಜನಿಕರ ಬೇಡಿಕೆ ಮೇರೆಗೆ ನಾವು ವಿಶೇಷ ಹೃದಯ ತಪಾಸಣೆ ಪ್ಯಾಕೇಜ್ ಅನ್ನು ರೂ. 3000 ಮತ್ತು ಸುಧಾರಿತ ಹೃದಯ ತಪಾಸಣೆ ಪ್ಯಾಕೇಜ್ 4000 ರೂ. ನಲ್ಲಿ ಪರಿಚಯಿಸುತ್ತಿದ್ದೇವೆ. ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಮುಖ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್, ಮಲ್ಪೆ ಭದ್ರತಾ ಪೊಲೀಸ್ ನಿರೀಕ್ಷಕ ಡಾ ಶಂಕರ್ ಎಸ್ ಕೆ ಉಪಸ್ಥಿತರಿದ್ದರು.

ವಿಶ್ವ ಹೃದಯ ದಿನದ ಕುರಿತು ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ.ಅಶ್ವಿನಿ ಕುಮಾರ್ ಅವಲೋಕನ ನೀಡಿದರು. ಶ್ರೀನಾಥ್ ಮಣಿಪಾಲ ಮತ್ತು ರವಿ ಹಿರೇಬೆಟ್ಟು ಪರಿಸರ ಸ್ನೇಹಿ ವಸ್ತುಗಳಿಂದ ಶಿಲ್ಪವನ್ನು ತಯಾರಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಉಚಿತ ಮಧುಮೇಹ ಮತ್ತು ರಕ್ತದ ಒತ್ತಡ ತಪಾಸಣೆ, ಇ ಸಿ ಜಿ ಮತ್ತು ವೈದ್ಯರೊಂದಿಗೆ ಸಮಾಲೋಚನೆ ನಡೆಸಲಾಯಿತು.

ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ ಪದ್ಮಕುಮಾರ್ ಸ್ವಾಗತಿಸಿ, ಹೃದ್ರೋಗ ತಪಾಸಣೆ ಪ್ಯಾಕೇಜ್‌ಗಳ ಕುರಿತು ಮಾಹಿತಿ ನೀಡಿದರು. ಹೃದಯನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಗಣೇಶ್ ಕಾಮತ್ ವಂದಿಸಿದರು. ಡಾ ಈಶ್ವರಿ ಆಚಾರ್ ನಿರೂಪಿಸಿದರು.

ROOTS INSTITUTE Digital Marketi

ಉಡುಪಿ ಕರಾವಳಿ

# ವಿಶ್ವ ಹೃದಯ ದಿನದ ಅಂಗವಾಗಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ ಮತ್ತು ಉಚಿತ ಹೃದಯ ತಪಾಸಣೆ ಶಿಬಿರ

3 weeks ago



Spread the love

**ಮಣಿಪಾಲ, 29ನೇ ಸೆಪ್ಟೆಂಬರ್ 2022:** ಸೆಪ್ಟೆಂಬರ್ 29 ಅನ್ನು ಪ್ರತಿ ವರ್ಷ ವಿಶ್ವ ಹೃದಯ ದಿನವನ್ನಾಗಿ ಆಚರಿಸಲಾಗುತ್ತದೆ. ಹೃದಯ ರಕ್ತನಾಳದ ಕಾಯಿಲೆಯ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ, ಇದು ಪ್ರಪಂಚದ ಎಲ್ಲಾ ಸಾಂಕ್ರಾಮಿಕವಲ್ಲದ ರೋಗಗಳ ಪಾಲಿನ ಅರ್ಧದಷ್ಟಿದೆ. ವಿಶ್ವ ಹೃದಯ ದಿನದ 2022 ರ ಘೋಷ ವಾಕ್ಯ "ಪ್ರತಿ ಹೃದಯಕ್ಕಾಗಿ ಹೃದಯವನ್ನು ಬಳಸಿ". ವಿಶ್ವ ಹೃದಯ ದಿನದ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ , ಹೃದಯರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಮುದಾಯ ವೈದ್ಯಕೀಯ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಹೃದಯದ ಆರೋಗ್ಯದ ಅರಿವು ಮೂಡಿಸಲು ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲದಲ್ಲಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ ಮತ್ತು ಸಾರ್ವಜನಿಕರಿಗೆ ಉಚಿತ ಹೃದಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.



ಶ್ರೀ ಅಬ್ದುಲ್ ಅಹದ್ ಐಪಿಎಸ್, ಪೊಲೀಸ್ ಅಧೀಕ್ಷಕರು- ಕರಾವಳಿ ಭದ್ರತಾ ಪೊಲೀಸ್, ಕರ್ನಾಟಕ ಇವರು ಹೃದಯ ಆರೋಗ್ಯ ಜಾಗೃತಿ ಶಿಲ್ಪವನ್ನು ಅನಾವರಣಗೊಳಿಸಿದರು ಮತ್ತು ಅವರು ಮಾತನಾಡುತ್ತಾ , "ನಮ್ಮನ್ನು ಅವಲಂಬಿತರಾಗಿ ಬಹಳಷ್ಟು ಜನ ನಮ್ಮ ಕುಟುಂಬದಲ್ಲಿ ಇರುತ್ತಾರೆ , ಅಕಾಲಿಕ ಮರಣ ಸಾಕಷ್ಟು ತೊಂದರೆಯನ್ನು ಉಂಟು ಮಾಡುತ್ತದೆ. ಆದ್ದರಿಂದ ಕಾಲ ಕಾಲಕ್ಕೆ ತಕ್ಕಂತೆ ನಮ್ಮ ಹೃದಯ ತಪಾಸಣೆ ಮಾಡುವುದರ ಮೂಲಕ ನಮ್ಮ ಹೃದಯ ಮತ್ತು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು" ಎಂದರು.

ಡಾ ಶರತ್ ಕುಮಾರ್ ರಾವ್, ಡೀನ್-ಕೆಎಂಸಿ ಇವರು ಹೃದಯ ಆರೋಗ್ಯ ತಪಾಸಣಾ ಪ್ಯಾಕೇಜುಗಳನ್ನು ಬಿಡುಗಡೆ ಮಾಡಿದರು. ಅವರು ಮಾತನಾಡುತ್ತಾ ,ಹೃದಯವು ವ್ಯಕ್ತಿ ಜೀವಂತವಾಗಿರಲು ಒಂದು ಯಂತ್ರದ ತರಹ ಕೆಲಸ ಮಾಡುತ್ತದೆ ಮತ್ತು ಇದು ದೇಹದ ಎಲ್ಲ ಜೀವಕೋಶಗಳಿಗೆ ರಕ್ತ , ಆಮ್ಲಜನಕ ಮತ್ತು ಪೌಷ್ಟಿಕಾಂಶಗಳನ್ನು ಪೂರೈಕೆ ಮಾಡುವುದರೊಂದಿಗೆ ರಕ್ತವನ್ನು ಶುದ್ದೀಕರಿಸುವ ಕಾರ್ಯವನ್ನು ಮಾಡುತ್ತದೆ. ಇಂತಹ ಬಹು ಮೂಲ್ಯ ಅಂಗವನ್ನು ಆರೋಗ್ಯವಾಗಿಟ್ಟುಕೊಳ್ಳಬೇಕು ಎಂದರು.



ಈ ಸಂದರ್ಭದಲ್ಲಿ ಮಾತನಾಡಿದ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅವರು, "ಸಾರ್ವಜನಿಕರ ಬೇಡಿಕೆ ಮೇರೆಗೆ ನಾವು ವಿಶೇಷ ಹೃದಯ ತಪಾಸಣೆ ಪ್ಯಾಕೇಜ್ ಅನ್ನು ರೂ 3000 ಮತ್ತು ಸುಧಾರಿತ ಹೃದಯ ತಪಾಸಣೆ ಪ್ಯಾಕೇಜ್ ರೂ 4000 ನಲ್ಲಿ ಪರಿಚಯಿಸುತ್ತಿದ್ದೇವೆ. ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು" ಎಂದರು.

ಮುಖ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್, ಮಲ್ಪೆ ಭದ್ರತಾ ಪೊಲೀಸ್ ನಿರೀಕ್ಷಕ ಡಾ ಶಂಕರ್ ಎಸ್ ಕೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ವಿಶ್ವ ಹೃದಯ ದಿನದ ಕುರಿತು ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ.ಅಶ್ವಿನಿ ಕುಮಾರ್ ಅವಲೋಕನ ನೀಡಿದರು. ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ ಪದ್ಮಕುಮಾರ್ ಸ್ವಾಗತಿಸಿ, ಹೃದ್ರೋಗ ತಪಾಸಣೆ ಪ್ಯಾಕೇಜ್‌ಗಳ ಕುರಿತು ಮಾಹಿತಿ ನೀಡಿದರು. ಹೃದಯನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಗಣೇಶ್ ಕಾಮತ್ ವಂದಿಸಿದರು. ಶ್ರೀನಾಥ್ ಮಣಿಪಾಲ ಮತ್ತು ರವಿ ಹಿರೇಬೆಟ್ಟು ಪರಿಸರ ಸ್ನೇಹಿ ವಸ್ತುಗಳಿಂದ ಶಿಲ್ಪವನ್ನು ತಯಾರಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಉಚಿತವಾಗಿ , ಮಧುಮೇಹ , ರಕ್ತದ ಒತ್ತಡ, ಇ ಸಿ ಜಿ ಮತ್ತುವೈದ್ಯರೊಂದಿಗೆ ಸಮಾಲೋಚನೆ ನಡೆಸಲಾಯಿತು. ಡಾ ಈಶ್ವರಿ ಆಚಾರ್ ಕಾರ್ಯಕ್ರಮ ನಿರ್ವಹಿಸಿದರು.

KARAVALI NEWS

ಉಡುಪಿ

# ಮಣಿಪಾಲ : ವಿಶ್ವ ಹೃದಯ ದಿನದ ಅಂಗವಾಗಿ ಉಚಿತ ಹೃದಯ ತಪಾಸಣೆ ಶಿಬಿರ

by karavalinews September 29, 2022 0 21

SHARE 0



Share Via:

ಮಣಿಪಾಲ : ಸೆಪ್ಟೆಂಬರ್ 29 ಅನ್ನು ಪ್ರತಿ ವರ್ಷ ವಿಶ್ವ ಹೃದಯ ದಿನವನ್ನಾಗಿ ಆಚರಿಸಲಾಗುತ್ತದೆ. ಹೃದಯ ರಕ್ತನಾಳದ ಕಾಯಿಲೆಯ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ. ವಿಶ್ವ ಹೃದಯ ದಿನದ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ , ಹೃದಯರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಮುದಾಯ ವೈದ್ಯಕೀಯ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಹೃದಯದ ಆರೋಗ್ಯದ ಅರಿವು ಮೂಡಿಸಲು ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ ಮತ್ತು ಸಾರ್ವಜನಿಕರಿಗೆ ಉಚಿತ ಹೃದಯ ತಪಾಸಣಾ ಶಿಬಿರ ನಡೆಯಿತು.

ಕರಾವಳಿ ಭದ್ರತಾ ಪಡೆಯ ಪೊಲೀಸ್ ಅಧೀಕ್ಷಕರಾದ ಅಬ್ದುಲ್ ಅಹದ್ ಐಪಿಎಸ್ ಅವರು ಹೃದಯ ಆರೋಗ್ಯ ಜಾಗೃತಿ ಶಿಲ್ಪವನ್ನು ಅನಾವರಣಗೊಳಿಸಿ ಮಾತನಾಡಿ, ಕಾಲ ಕಾಲಕ್ಕೆ ನಮ್ಮ ಹೃದಯ ತಪಾಸಣೆ ಮಾಡುವುದರ ಮೂಲಕ ನಮ್ಮ ಹೃದಯ ಮತ್ತು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು.

ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್ ಹೃದಯ ಆರೋಗ್ಯ ತಪಾಸಣಾ ಪ್ಯಾಕೇಜುಗಳನ್ನು ಬಿಡುಗಡೆ ಮಾಡಿ ಮಾತನಾಡಿ, ಹೃದಯವು ವ್ಯಕ್ತಿ ಜೀವಂತವಾಗಿರಲು ಒಂದು ಯಂತ್ರದ ತರಹ ಕೆಲಸ ಮಾಡುತ್ತದೆ ಮತ್ತು ಇದು ದೇಹದ ಎಲ್ಲಾ ಜೀವಕೋಶಗಳಿಗೆ ರಕ್ತ, ಆಮ್ಲಜನಕ ಮತ್ತು ಪೌಷ್ಟಿಕಾಂಶಗಳನ್ನು ಪೂರೈಕೆ ಮಾಡುವುದರೊಂದಿಗೆ ರಕ್ತವನ್ನು ಶುದ್ಧೀಕರಿಸುವ ಕಾರ್ಯವನ್ನು ಮಾಡುತ್ತದೆ. ಇಂತಹ ಬಹು ಅಮೂಲ್ಯ ಅಂಗವನ್ನು ಆರೋಗ್ಯವಾಗಿಟ್ಟುಕೊಳ್ಳಬೇಕು ಎಂದರು.

ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮಾತನಾಡಿ, ಸಾರ್ವಜನಿಕರ ಬೇಡಿಕೆ ಮೇರೆಗೆ ನಾವು ವಿಶೇಷ ಹೃದಯ ತಪಾಸಣೆ ಪ್ಯಾಕೇಜ್ ಅನ್ನು ರೂ. 3000 ಮತ್ತು ಸುಧಾರಿತ ಹೃದಯ ತಪಾಸಣೆ ಪ್ಯಾಕೇಜ್ ರೂ. 4000 ನಲ್ಲಿ ಪರಿಚಯಿಸುತ್ತಿದ್ದೇವೆ. ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್, ಮಲ್ಪೆ ಭದ್ರತಾ ಪೊಲೀಸ್ ನಿರೀಕ್ಷಕ ಡಾ.ಶಂಕರ್.ಎಸ್.ಕೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.
ವಿಶ್ವ ಹೃದಯ ದಿನದ ಕುರಿತು ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ.ಅಶ್ವಿನಿ ಕುಮಾರ್ ಅವಲೋಕನ ನೀಡಿದರು. ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ ಪದ್ಮಕುಮಾರ್ ಸ್ವಾಗತಿಸಿ, ಹೃದ್ರೋಗ ತಪಾಸಣೆ ಪ್ಯಾಕೇಜ್‌ಗಳ ಕುರಿತು ಮಾಹಿತಿ ನೀಡಿದರು.

# World Heart Day : ಕಸ್ತೂರಿ ಬಾ, ಮಣಿಪಾಲ ಆಸ್ಪತ್ರೆಯಲ್ಲಿ ಉಚಿತ ಹೃದಯ ತಪಾಸಣೆ ಶಿಬಿರ

ಸೆಪ್ಟೆಂಬರ್ 29 ಪ್ರತಿ ವರ್ಷ 'ವಿಶ್ವ ಹೃದಯ ದಿನ'ವನ್ನಾಗಿ ಆಚರಿಸಲಾಗುತ್ತದೆ. ಹೃದಯ ರಕ್ತನಾಳದ ಕಾಯಿಲೆಯ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ, ಈ ಸಮಸ್ಯೆಯು ಪ್ರಪಂಚದ ಎಲ್ಲಾ ಸಾಂಕ್ರಾಮಿಕವಲ್ಲದ ರೋಗಗಳ ಪಾಲಿನ ಅರ್ಧದಷ್ಟಿದೆ.



Ravi Janekal
First Published Sep 29, 2022, 3:34 PM IST

**ಉಡುಪಿ (ಸೆ.29) :** ವಿಶ್ವ ಹೃದಯ ದಿನದ 2022 ರ ಘೋಷ ವಾಕ್ಯ 'ಪ್ರತಿ ಹೃದಯಕ್ಕಾಗಿ ಹೃದಯವನ್ನು ಬಳಸಿ' ವಿಶ್ವ ಹೃದಯ ದಿನದ ಅಂಗವಾಗಿ ಮಣಿಪಾಲದ ಕಸ್ತೂರಿ ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಹೃದ್ರೋಗ ವಿಭಾಗ, ಹೃದಯರಕ್ತನಾಳ ಮತ್ತು ಎದೆಗೂಡಿನ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಮುದಾಯ ವೈದ್ಯಕೀಯ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಹೃದಯದ ಆರೋಗ್ಯದ ಅರಿವು ಮೂಡಿಸಲು ಕಸ್ತೂರಿ ಬಾ ಆಸ್ಪತ್ರೆ, ಮಣಿಪಾಲದಲ್ಲಿ ಹೃದಯ ಆರೋಗ್ಯ ಜಾಗೃತಿ ಕಲಾ ಶಿಲ್ಪ ಅನಾವರಣ ಮತ್ತು ಸಾರ್ವಜನಿಕರಿಗೆ ಉಚಿತ ಹೃದಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

## Other Link:

- **Public Next:** https://publicnext.com/article/nid/Udupi/Health-and-Fitness/node=716273